# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103

ಸಂಖ್ಯೆ: ತುವಿ:ಶೈವಿ:2024-25/1955

ದಿನಾಂಕ: 26.08.2024

## ಸುತ್ತೋಲೆ

**ವಿಷಯ** : ಪ್ರತಿ ವರ್ಷ ಆಗಸ್ಟ್ 01 ರಂದು ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯನ್ನು ವ್ಯಸನಮುಕ್ತ ದಿನಾಚರಣೆಯನ್ನಾಗಿ ಆಚರಿಸುವ ಬಗ್ಗೆ.

**ಉಲ್ಲೇಖ** : ಶ್ರೀ ಮ.ನಿ.ಪ್ರ ಗುರುಮಹಾಂತಶ್ರೀಗಳು ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನಮಠ, ಇಲಕಲ್ಲ ಇವರ ಪತ್ರ ದಿನಾಂಕ: 15.07.2024.

* * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದನ್ವಯ, ಪ್ರಸ್ತುತ ಸಮಾಜದಲ್ಲಿ ಹಲವಾರು ದುಶ್ಚಟಗಳಿಗೆ ಬಲಿಯಾಗಿ ತಮ್ಮ ಭವಿಷ್ಯವನ್ನು ಹಾಳುಮಾಡಿಕೊಳ್ಳುವ ಜನರಿಗೆ ಅದರಿಂದ ಮುಕ್ತಗೊಳಿಸಲು ಶ್ರೀ ಮ.ನಿ.ಪ್ರ ಡಾ. ಮಹಾಂತ ಶಿವಯೋಗಿಗಳವರು, ಚಿತ್ತರಗಿ ಶ್ರೀ ವಿಜಯ ಮಹಾಂತೇಶ್ವರ ಸಂಸ್ಥಾನಮಠ, ಚಿತ್ತರಗಿ ಇಲಕಲ್ಲ ಇವರು ಹತ್ತಾರು ಸಾವಿರ ಹಳ್ಳಿಗಳನ್ನು ಸಂಚರಿಸಿ ಲಕ್ಷಾಂತರ ಜನರ ದುಶ್ಚಟಗಳನ್ನು ಬಿಡಿಸಿ ಅವರ ಬದುಕನ್ನು ಹಸನಾಗಿಸಿದ್ದಾರೆ ಈ ಸೇವೆಯನ್ನು ಗುರ್ತಿಸಿದ ಸರ್ಕಾರವು ಪೂಜ್ಯರ ಜನ್ಮದಿನ ಆಗಸ್ಟ್ 01 ರಂದು ವ್ಯಸನಮುಕ್ತ ದಿನಾಚರಣೆಯನ್ನಾಗಿ ಆಚರಿಸಲು ಆದೇಶ ನೀಡಿದೆ. ಈ ದಿನಾಚರಣೆಯ ಅಂಗವಾಗಿ ಎಲ್ಲಾ ಶಾಲಾ ಕಾಲೇಜು ಮತ್ತು ವಿಶ್ವವಿದ್ಯಾಲಯ ವಿದ್ಯಾರ್ಥಿಗಳಿಗೆ ದುಶ್ಚಟದಿಂದಾಗುವ ದುಷ್ಪರಿಣಾಮ ಕುರಿತು ನುರಿತ ತಜ್ಞರಿಂದ ಉಪನ್ಯಾಸ ಮಾಡಿಸಿ, ವಿದ್ಯಾರ್ಥಿಗಳಿಂದ ಶಿಕ್ಷಕರು ಪ್ರಮಾಣ ವಚನ ಸ್ವೀಕರಿಸುವುದರಿಂದ ನೈತಿಕ ಪ್ರಜ್ಞೆ ಮೂಡುವುದು (ಸರ್ಕಾರದ ಆದೇಶವನ್ನು ಈ ಪತ್ರದೊಂದಿಗೆ ಲಗತ್ತಿಸಿದೆ).

ಈ ಪ್ರಯುಕ್ತ ಸರ್ಕಾರದ ಆದೇಶದಲ್ಲಿ ವಿವರಿಸಿರುವಂತೆ ಹಲವಾರು ದುಶ್ಚಟಗಳಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ತಿಳುವಳಿಕೆ ನೀಡಿ ವಿಶ್ವವಿದ್ಯಾನಿಲಯದ ಸಂಯೋಜಿತ ಹಾಗೂ ಘಟಕ ಕಾಲೇಜುಗಳು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನ ವಿಭಾಗಗಳ ವಿದ್ಯಾರ್ಥಿಗಳಿಗೆ ಈ ಕುರಿತು ತಿಳುವಳಿಕೆ ನೀಡುವುದು ಹಾಗೂ ಪ್ರತಿ ವರ್ಷ ಆಗಸ್ಟ್ 01 ರಂದು ವ್ಯಸನಮುಕ್ತ ದಿನಾಚರಣೆಯನ್ನಾಗಿ ಆಚರಿಸಲು ಕ್ರಮ ಕೈಗೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ.

26/08/2024

ಉಪಕುಲಸಚಿವರು

ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ,

1. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ ಕಾಲೇಜುಗಳು ಮತ್ತು ವಿಶ್ವವಿದ್ಯಾನಿಲಯದ ವ್ಯಾಪ್ತಿಗೊಳಪಡುವ ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮುಖ್ಯಸ್ಥರು/ಸಂಯೋಜಕರು ಸ್ನಾತಕೋತ್ತರ ಅಧ್ಯಯನ ಕೇಂದ್ರ ಮತ್ತು ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು:**

1. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.-ಇ-ಮೇಲ್ ಮೂಲಕ ಕಳುಹಿಸುವುದು.
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಛೇರಿ ಪ್ರತಿ.